2. ಶಾಸನ ರಚನೆ

(i) ವಿಧೇಯಕಗಳ ಮಂಡನೆ

(ಅ) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2009 ಮಂಡನೆಗೆ ಅನುಮತಿ ಕೋರಿಕೆ

ಡಾ॥ ವಿ.ಎಸ್. ಆಚಾರ್ಯ (ಗೃಹ ಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ; 2009 ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಡಾ॥ ವಿ.ಎಸ್. ಆಚಾರ್ಯ (ಗೃಹ ಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009 ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ - 1)

(ಆ) ಕರ್ನಾಟಕ ವ್ಯವಸ್ಥಿತ ಅಪರಾಧಗಳು (ತಿದ್ದುಪಡಿ) ನಿಯಂತ್ರಣ ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಡಾ॥ ವಿ.ಎಸ್. ಆಚಾರ್ಯ (ಗೃಹ ಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ: 2009 ರ ಕರ್ನಾಟಕ ವ್ಯವಸ್ಥಿತ ಅಪರಾಧಗಳು (ತಿದ್ದುಪಡಿ) ನಿಯಂತ್ರಣ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009 ರ ಕರ್ನಾಟಕ ವ್ಯವಸ್ಥಿತ ಅಪರಾಧಗಳು (ತಿದ್ದುಪಡಿ) ನಿಯಂತ್ರಣ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಡಾ॥ ವಿ.ಎಸ್. ಆಚಾರ್ಯ (ಗೃಹ ಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009 ರ ಕರ್ನಾಟಕ ವ್ಯವಸ್ಥಿತ ಅಪರಾಧಗಳು(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ - 2)

ಅಧ್ಯಕ್ಷರು :- ನಂತರ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳ....

ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ) :- ಮಾನ್ಯ ಸಭಾಧ್ಯಕ್ಷರೆ, ಈ ಬಗ್ಗೆ ಕೋರ್ಟ್‌ನಲ್ಲಿ ಕೇಸ್ ನಡೆಯುತ್ತಿದೆ. ಮೊನ್ನೆ BAC ಸಭೆಯಲ್ಲಿ ಇದನ್ನು ತೆಗೆದುಕೊಳ್ಳುವುದಿಲ್ಲವೆಂದು ಹೇಳಿದ್ದೀರಿ. ಆದರೂ ಇದನ್ನು ತಂದಿರುವುದು ಸರಿಯಿಲ್ಲ. ದಯಮಾಡಿ ಇದನ್ನು ನಿಲ್ಲಿಸಬೇಕು.

(ಗೊಂದಲ)

ಅಧ್ಯಕ್ಷರು :- Introduction ಮಾಡುವುದಿಲ್ಲವೆಂದು ಹೇಳಿದ್ದಾರೆ. Next ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ-2009, ಶ್ರೀ ಉಮೇಶ್ ಕತ್ತಿಯವರು.

ಶ್ರೀ ಟಿ.ಬಿ. ಜಯಚಂದ್ರ :- ಮೂರು universitiesಗೆ ಸಂಬಂಧಿಸಿದಂತೆ ಮೂರು ಬಿಲ್ ಇದೆ. Raichur ನ Agriculture University, Bagalkot Horticulture University and University Act. ಈ ಮೂರು Act ಗಳೂ ಕೂಡ ಒಂದಕ್ಕೊಂದು ಸಂಬಂಧ ಇರುವಂತಹವು. ಆದ್ದರಿಂದ ಎಲ್ಲಾ ಸೇರಿಸಿ ಒಂದೇ ಸಲ ಮಾಡಿ.

ಅಧ್ಯಕ್ಷರು :- ಮೊದಲು ಅವರು ಮಂಡಿಸಲಿ, ವಿಧೇಯಕಗಳನ್ನು ಪರ್ಯಾಲೋಚಿಸುವ ಸಂದರ್ಭದಲ್ಲಿ ಏನು ವಿಷಯವಿದೆ ಎನ್ನುವ ಬಗ್ಗೆ ನೀವು discuss ಮಾಡಿ.